ಇ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ವೈದ್ಯೇತರ ಕೆಲವು ಹುದ್ದೆಗಳಿಗೆ ನೇಮಕಾತಿ ಮಾಡಲು ವಿಶೇಷ ನಿಯಮಾವಳಿ ರಚಿಸುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಗುಲ್ಬರ್ಗಾ ಜಿಲ್ಲೆಯ ಸೇಡಂ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಸಿಬ್ಬಂದಿಯ ಕೊರತೆ

2505(2985) ಶ್ರೀ ಬಸವಂತರಡ್ಡಿ ಮೊತಕಪಲ್ಲಿ (ಸೇಡಂ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳು, ಸಿಬ್ಬಂದಿ ವರ್ಗದವರು ಇಲ್ಲದೆ ನಗರದ ಹಾಗೂ ಆ ಭಾಗದ ನಾಗರೀಕರಿಗೆ ಆರೋಗ್ಯ ಚಿಕಿತ್ಸೆಗಾಗಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿರುವ ಒಟ್ಟು ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು? ನಾಲ್ಕನೆ ವರ್ಗದ ಸಿಬ್ಬಂದಿ ಇಲ್ಲದಿರುವುದರಿಂದ ಆಸ್ಪತ್ರೆಯಲ್ಲಿ ಸ್ವಚ್ಛತೆ ಕಾಪಾಡಂತಹ ಅನಾನುಕೂಲವಾಗಿರುವುದು ನಿಜವಲ್ಲವೇ?

ಇ) ವೈದ್ಯಾಧಿಕಾರಿಗಳನ್ನು ಇತರೇ ಸಿಬ್ಬಂದಿ ವರ್ಗದವರನ್ನು ತುಂಬಿ ಈ ಆಸ್ಪತ್ರೆಯಲ್ಲಿ ಸ್ವಚ್ಛತೆಯನ್ನು ಕಾಪಾಡಿ ನಾಗರೀಕರಿಗೆ ಚಿಕಿತ್ಸೆಗಾಗಿ ಸುವ್ಯವಸ್ಥೆಯನ್ನು ಎಂದುನಿಂದ ಮಾಡಲಾಗುವುದು?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಬಂದಿದೆ.

ಅ)	ಮಂಜೂರು	ಕಾರ್ಯನಿರತ	ಖಾಲಿ
ವೈದ್ಯರು	07	03	04
ಸಿಬ್ಬಂದಿ	31	07	24

ಹೌದು.

ಇ) ಖಾಲಿ ಇರುವ ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಮತ್ತು 550 ವೈದ್ಯರ ನೇಮಕಾತಿ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಕೆಲವು ವೈದ್ಯೇತರ ಹುದ್ದೆಗಳನ್ನು ತುಂಬಲು ವಿಶೇಷ ನೇಮಕಾತಿ ನಿಯಮಾವಳಿ ರಚಿಸಲು ಸರ್ಕಾರದ ಪರಿಶೀಲನೆಯಲ್ಲಿದೆ.